ದಿನಾಂಕಃ **18.07.2025** ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ ಶ್ರೀ ಕೆ ಎಸ್ ಆರ್ ವಕೀಲರಿಂದಃ-

ನಾನು ಬಿ ವಿ ಎಸ್ ಸಿ ಪದವೀಧರೆ. ಈ ದಾವೆಯನ್ನು ಹೂಡುವ ಸಮಯದಲ್ಲಿ ನನಗೆ 17 ವರ್ಷ ವಯಸ್ಸಾಗಿತ್ತು. ನಾನು ನನ್ನ ಪದವಿ ವಿದ್ಯಾಭ್ಯಾಸವನ್ನು ಶಿವಮೊಗ್ಗದಲ್ಲಿ ಮುಗಿಸಿರುತ್ತೇನೆ. ನಾನು ಶಿವಮೊಗ್ಗದಲ್ಲಿದ್ದಕಾರಣ ಕಡೂರಿನಲ್ಲಿ ಆದ ಘಟನೆಗಳ ಬಗ್ಗೆ ಮಾಹಿತಿ ಇಲ್ಲಾ ಎಂದರೆ ಸರಿಯಲ್ಲ. ವಾದಿ ಯಾವ ಪರಿಹಾರ ಕೋರಿ ಈ ದಾವೆ ಹೂಡಿರುತ್ತಾರೆ ಎಂದು ನನಗೆ ಗೊತ್ತು. ಯಾವ ವಿಚಾರಕ್ಕೆ ಎಂದರೆ ದಾವಾ ಆಸ್ತಿಯನ್ನು ಪ್ರತಿವಾದಿಗಳು ಅತಿಕ್ರಮ ಮಾಡಲು ಪ್ರಯತ್ನಪಟ್ಟಿರುವ ಬಗ್ಗೆ ಹಾಕಿರುತ್ತಾರೆ ಎಂದು ನುಡಿಯುತ್ತಾರೆ. ಈ ದಾವೆಯ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಇತ್ತೀಚೆಗೆ ತಿಳಿದುಕೊಂಡಿರುತ್ತೇನೆ. ವಾದಿಗಳಿಗೆ ದಾವಾ ಆಸ್ತಿಯನ್ನು ಎಲ್ ಸಿ ರವೀಂದ್ರಕುಮಾರ್ ಬಿನ್ ರುದ್ರಪ್ಪ ರವರು ಮಾರಾಟ ಮಾಡಿರುತ್ತಾರೆ ಎಂದರೆ ಸರಿ. ಸದರಿ ಕ್ರಯಪತ್ರವನ್ನು ನಾನು ಪರಿಶೀಲಿಸಿರುತ್ತೇನೆ. ಎಲ್ ಸಿ

ರವೀಂದ್ರಕುಮಾರ್ ರವರು ದಾವಾ ಆಸ್ತಿಯನ್ನು ಜೆ ಡಿ ಚಾವ್ಲ ರವರಿಂದ ಖರೀದಿ ಮಾಡಿರುತ್ತಾರೆ. ಸದರಿ ಜೆ ಡಿ ಚಾವ್ಲ ರವರನ್ನು ನಾನು ನೋಡಿರುವುದಿಲ್ಲ. ಜೆ ಡಿ ಚಾವ್ಲ ರವರಿಗೆ ಹೇಗೆ ಬಂತು ಎಂಬ ಬಗ್ಗೆ ಮಾಹಿತಿ ನನಗೆ ಇಲ್ಲ. ದಾವಾ ಆಸ್ತಿಯ ಹಳೆಯ ಸರ್ವೆ ನಂ 791ಃ1899 ಎಂದರೆ ಸಾಕ್ಷಿಯು 791 ಇರುವುದು ನನಗೆ ಗೊತ್ತು ಆದರೆ 1899 ಇರುವುದು ನನಗೆ ಗೊತ್ತಿಲ್ಲ ಎಂದು ನುಡಿಯುತ್ತಾರೆ. ದಾವಾ ಆಸ್ತಿಯ ಬಗ್ಗೆ ಸ್ಥಳೀಯ ಪೋಲಿಸ್ ಠಾಣೆಯಲ್ಲಿ ದೂರು ದಾಖಲಾಗಿ ಪೋಲಿಸರು ಸಿವಿಲ್ ನ್ಯಾಯಾಲಯದಲ್ಲಿ ಬಗೆಹರಿಸಿಕೊಳ್ಳಿ ಎಂದು ಹಿಂಬರಹ ನೀಡಿರುತ್ತಾರೆ ಎಂದರೆ ಸರಿ.

ನನ್ನ ಪ್ರತಿವಾದ ಪತ್ರದಲ್ಲಿ ದಾವಾ ಆಸ್ತಿಯ ಚಕ್ಕುಬಂಧಿ ಸರಿಯಾಗಿಲ್ಲ ಎಂದು ಹೇಳಿರುವುದಿಲ್ಲ. ದಾವಾ ಆಸ್ತಿಯ ಪೂರ್ವದಲ್ಲಿ ನಮಗೆ ಸೇರಿದ ಆಸ್ತಿ ಇದೆ ಎಂದರೆ ಸಾಕ್ಷಿ ಉತ್ತರ ದಿಕ್ಕಿನಲ್ಲಿದೆ ಎಂದು ನುಡಿಯುತ್ತಾರೆ. ದಾವಾ ಆಸ್ತಿಗೆ ಸಂಬಂಧಿಸಿದ ಮೂಲ ದಾಖಲೆಯನ್ನು ನಾನು ನೋಡಿರುತ್ತೇನೆ.

( ಮುಂದುವರೆದ ಪಾಟೀ ಸವಾಲಿಗಾಗಿ ಸಮಯಕೋರಿದ್ದರಿಂದ ಮುಂದೂಡಲಾಯಿತು )

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.